785 ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಬಗ್ಗೆ ಹಲವಾರು ವರ್ಷಗಳಿಂದ ಸರ್ಕಾರಕ್ಕೆ ಸಾರ್ವಜನಿಕರಿಂದ ಹಾಗೂ ಜನಪ್ರತಿನಿಧಿಗಳಿಂದ ಬೇಡಿಕೆ ಬಂದಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬೇಡಿಕೆಯನ್ನು ಪರಿಗಣಿಸಿ ಬೀದರ್ ಜಿಲ್ಲೆಯಲ್ಲಿಯೇ ಅತ್ಯಂತ ಹೆಚ್ಚಿನ ಸಂಖ್ಯೆಯಲ್ಲಿ ವಾಹನಗಳನ್ನು ಹೊಂದಿರುವ ಬಸವ ಕಲ್ಯಾಣದಲ್ಲಿ ಎ.ಆರ್.ಟಿ.ಓ ಕಛೇರಿಯನ್ನು ಸ್ಥಾಪಿಸಲು ಕ್ರಮ ಕೈಗೊಳ್ಳುವುದೇ;

ಇ) ಹಾಗಿಲ್ಲದಿದ್ದಲ್ಲಿ, ಕಾರಣಗಳೇನು; ಎಂದಿನಿಂದ ಕಛೇರಿಯನ್ನು ಸ್ಥಾಪಿಸಲಾಗುದು?

ಶ್ರೀ ಆರ್.ಅಶೋಕ (ಸಾರಿಗೆ ಸಚಿವರು) :

ಅ) ಹೌದು.

ಆ) ಮತ್ತು ಇ) ಪರಿಶೀಲನೆಯಲ್ಲಿದೆ.

ಜಮಲಾಬಾರ್ ಕೋಟೆಗೆ ಸೌಲಭ್ಯಗಳನ್ನು ಕಲ್ಪಿಸುವುದು

10 ಶ್ರೀ ವಸಂತ ಬಂಗೇರ.ಕೆ (ಬೆಳ್ತಂಗಡಿ) : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿಯಲ್ಲಿರುವ ಜಮಲಾಬಾದ್ (ನರಸಿಂಗಘಡ) ಕೋಟೆಯನ್ನು ಪ್ರವಾಸಿ ತಾಣವೆಂದು ಘೋಷಿಸಿರುವ ಇಲಾಖೆಯಲ್ಲಿ ಪ್ರವಾಸಿಗರಿಗೆ ಯಾವ ಸೌಕರ್ಯಗಳನ್ನು ಕಲ್ಪಿಸಿದೆ;

ಆ) ಕಳೆದ ಎರಡು ವರ್ಷಗಳಲ್ಲಿ ಅಲ್ಲಿಗೆ ಭೇಟಿ ನೀಡಿರುವ ಪ್ರವಾಸಿಗರ ಸಂಖ್ಯೆ ಎಷ್ಟು ಮತ್ತು ಅವರಿಂದ ವಸೂಲಿ ಮಾಡಿರುವ ಶುಲ್ಕದ ಒಟ್ಟು ಮೊತ್ತವೆಷ್ಟು;

ಇ) ಈ ವರ್ಷ ಹಾಗೂ ಮುಂದಿನ ವರ್ಷಗಳಲ್ಲಿ ಈ ಪ್ರವಾಸಿ ಕೇಂದ್ರದಲ್ಲಿ ಪ್ರವಾಸಿಗರಿಗೆ ಯಾವ ಅನುಕೂಲತೆಗಳನ್ನು ಕಲ್ಪಿಸಲು ಇಲಾಖೆ ಯೋಜನೆಗಳನ್ನು ರೂಪಿಸಿದೆ?